**<u>ಸಾಕ್ಷಿಗೆ ದಿನಾಂಕ 06.11.2025 ರಂದು -ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಪಾಟೀ ಸವಾಲು: 1 ನೇ ಎದುರುದಾರರ ಪರ ಶ್ರೀ.ವಿ.ಕೆ. ವಕೀಲರಿಂದ:</u>**

1. ನಾನು ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಓದಿರುತ್ತೇನೆ. ನಾನು ನನ್ನ ವಾಹನ ಚಾಲನಾ ಪರವಾನಗಿ ಪತ್ರವನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಿಲ್ಲ ಎಂದರೆ ಸರಿ. ನಾನು ಅಪಘಾತದ ಸಮಯದಲ್ಲಿ ಚಲಾಯಿಸುತ್ತಿದ್ದ ವಾಹನದ ಮಾಲೀಕತ್ವದ ದಾಖಲೆಯನ್ನು ಹಾಜರುಪಡಿಸಿರುತ್ತೇನೆ. ಅಪಘಾತದ ಸಮಯದಲ್ಲಿ ನಾನು ಶಿರಸ್ತ್ರಾಣ ಧರಿಸಿರುತ್ತೇನೆ. ಅದರ ಬಗ್ಗೆ ದಾಖಲೆ ಹಾಜರುಪಡಿಸಿರುತ್ತೇನೆ. ನಿಪಿ.1 ರಲ್ಲಿ ನನ್ನ ತಾಯಿ ನಾನು ಬಾರ್ ನಲ್ಲಿ ಕೆಲಸ ಮಾಡುತ್ತಿದ್ದೆ ಎಂದು ಹೇಳಿರುತ್ತಾಳೆ ಎಂದರೆ ನಾನು ಬಾರ್ ಕೆಲಸ ಮಾಡುವುದನ್ನು ಬಿಟ್ಟು ಎಲೆಕ್ಟ್ರಿಶೀಯನ್ ಕೆಲಸ ಮಾಡುತ್ತಿದ್ದೆ. ಅಪಘಾತದ ಸಮಯದಲ್ಲಿ ನಾನು ಮದ್ಯಪಾನ ಮಾಡಿ ದ್ವಿಚಕ್ರ ವಾಹನ ಚಲಾಯಿಸುತ್ತಿದ್ದೆ ಎಂದರೆ ಸರಿಯಲ್ಲ. ಅದಕ್ಕೆ ಸಂಬಂಧಿಸಿದಂತೆ ದಾಖಲೆಯನ್ನು ಹಾಜರುಪಡಿಸಿರುತ್ತೇನೆ. ನಿಪಿ.11 ಕ್ಕೆ ಸಂಬಂಧಿಸಿದಂತೆ ರೂ.1,57,462/- ವೈದ್ಯಕೀಯ ಬಿಲ್ಲುಗಳು ಆಗಿದ್ದು, ನಾನು ಒಟ್ಟು ರೂ.2,00,000/- ವೈದ್ಯಕೀಯ ಬಿಲ್ಲು ಕೇಳಲು ಕಾರಣವೇನೆಂದರೆ ನಾನು ನಾಟೀ ವೈದ್ಯರ ಬಳಿ ಚಿಕಿತ್ಸೆ ಪಡೆದಿರುತ್ತೇನೆ.

2. ನಾನು ನನ್ನ ಪರಿಹಾರ ಅರ್ಜಿಯಲ್ಲಿ ರೂ.30,00,000/- ಕೇಳಿದ್ದು, ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದಲ್ಲಿ ರೂ.20,00,000/- ಕೇಳಿರುತ್ತೇನೆ ಎಂದರೆ ಸರಿಯಲ್ಲ. ನನ್ನ ಅಂಗನ್ಯೂನತೆಯ ಶೇಕಡಾ ಪ್ರಮಾಣತೆಯನ್ನು ತೋರಿಸಲು ದಾಖಲೆಯನ್ನು ಹಾಜರುಪಡಿಸಿರುತ್ತೇನೆ. ಪರಿಹಾರ ಪಡೆಯುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆಃ ಇಲ್ಲ.</u>**

**(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ.)**
**(ಓ. ಹೇ. ಕೇ. ಸ.ಇ)**

**3ನೇ ಹೆಚ್ಚುವರಿ ಲಘು ವ್ಯವಹಾರಗಳ**
**ನ್ಯಾಯಾಧೀಶರು, ಬೆಂಗಳೂರು.**